ಕರ್ನಾಟಕ ಸರ್ಕಾರ
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 012. ದೂರವಾಣಿ: 080-23 460 460 (5 ಲೈನ್‌ಗಳು)
ಫ್ಯಾಕ್ಸ್: 080-23461576 ಇ-ಮೇಲ್: keauthority-ka@nic.in ವೆಬ್‌ಸೈಟ್: http://kea.kar.nic.in

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.11/2020-21 ದಿನಾಂಕ: 07-11-2020

ಅಧಿಸೂಚನೆ

ಕರ್ನಾಟಕದಲ್ಲಿನ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ಏಕರೂಪದ ಕೌನ್ಸಿಲಿಂಗ್ - 2020-21 ಹಾಗು ಕರ್ನಾಟಕದ ವಿದ್ಯಾರ್ಥಿಗಳಿಗೆ ಆಯುಷ್ ಕೋರ್ಸುಗಳಿಗೆ ಸೀಟು ಹಂಚಿಕೆ

1. ಸರ್ಕಾರದ ಆದೇಶದ ಸಂಖ್ಯೆ ಆಕುಕ 124 ಆರ್‌ಜಿಯು ಬೆಂಗಳೂರು ದಿನಾಂಕ 28-06-2017 ರಲ್ಲಿ, ಎಲ್ಲಾ ಸರ್ಕಾರಿ, ಖಾಸಗಿ (ಅಲ್ಪ ಸಂಖ್ಯಾತವೂ ಸೇರಿದಂತೆ), ಕಾಲೇಜುಗಳಲ್ಲಿನ ಸರ್ಕಾರಿ, ಖಾಸಗಿ, ಎನ್ ಆರ್ ಐ, ಮತ್ತು ಇತರೆ ವೈದ್ಯಕೀಯ / ದಂತವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ಏಕರೂಪದ ಕೌನ್ಸಿಲಿಂಗ್ ಅನ್ನು ನಡೆಸಲು ನಿರ್ದೇಶಿಸಿದೆ.
2. ಪ್ರವೇಶ ಸಮಿತಿಯ ಸೂಚನೆಗಳ ಅನ್ವಯ, 2020-21ನೇ ಸಾಲಿಗೆ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (ಕಪಪ್ರಾ) UG NEET 2020 ರಲ್ಲಿ ಅರ್ಹತೆಯನ್ನು ಪಡೆದಿರುವ ಹಾಗು ಅರ್ಹತಾ ಮಾನದಂಡಗಳನ್ನು ಪೂರೈಸುವ ಎಲ್ಲಾ ಅರ್ಹ ಅಭ್ಯರ್ಥಿಗಳಿಂದ ಹಾಗು ಕರ್ನಾಟಕದ ಅಭ್ಯರ್ಥಿಗಳಿಂದ ಸರ್ಕಾರದ ಪಾಲಿನ ಆಯುಷ್ ಸೀಟುಗಳಿಗೆ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ. NEET-UG 2020 ರಲ್ಲಿ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳು ಮಾತ್ರ ವೈದ್ಯಕೀಯ / ದಂತ ವೈದ್ಯಕೀಯ / ಆಯುಷ್ ಕೋರ್ಸುಗಳ ಪ್ರವೇಶಕ್ಕೆ ನೊಂದಣಿ ಮಾಡಿಕೊಳ್ಳಲು ಅರ್ಹರಿರುತ್ತಾರೆ. SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.
3. ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ. ಆದ್ದರಿಂದ NEET-UG 2020 ರಲ್ಲಿ ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ (50th Percentile) ಅರ್ಹತೆಯನ್ನು ಪಡೆಯಬಹುದಾಗಿದೆ ಹಾಗು ಪ್ರವೇಶಕ್ಕಾಗಿ ನೊಂದಣಿಯನ್ನು ಮಾಡಿಕೊಳ್ಳಬಹುದಾಗಿದೆ. SC/ST/OBC ಅರ್ಹತಾ ಮಾನದಂಡಗಳು ಕರ್ನಾಟಕ SC/ST/OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.
4. 2020-21ನೇ ಸಾಲಿಗೆ ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ವೈದ್ಯಕೀಯ / ದಂತವೈದ್ಯಕೀಯ ಕಾಲೇಜುಗಳಲ್ಲಿನ ವೈದ್ಯಕೀಯ ದಂತವೈದ್ಯಕೀಯ ಕೋರ್ಸುಗಳು, ಖಾಸಗಿ ಮತ್ತು ಅಲ್ಪ ಸಂಖ್ಯಾತ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳಲ್ಲಿನ ಸರ್ಕಾರಿ ಕೋಟದ ಸೀಟುಗಳು, ಖಾಸಗಿ ವೈದ್ಯಕೀಯ / ದಂತ ವೈದ್ಯಕೀಯ (KPCF, KRLMPCA, AMPCK) ಸೀಟುಗಳಿಗೆ Karnataka Selection of Candidates for Admission to Government Seats in Professional Educational Institutions Rules, 2006 as amended from time to time ಹಾಗು as per the guidelines of MCI / DCI / Ministry of Health and Family Welfare, GOI / Government of India / Director Medical Education, Karnataka / Entrance Test Committee ಅನ್ವಯ KPCF, KRLMPCA, AMPCK ಕಾಲೇಜುಗಳಿಗೆ ಸರ್ಕಾರವು ನಿಗದಿಪಡಿಸುವ ಸೀಟುಗಳಿಗೆ ಏಕರೂಪದ ಕೌನ್ಸಿಲಿಂಗ್ ಅನ್ನು ನಡೆಸಲಾಗುವುದು.
5. NEET-2020 ಮಾಹಿತಿ ಪುಸ್ತಕದಲ್ಲಿ ನೀಡಿರುವ ಶೈಕ್ಷಣಿಕ ಅರ್ಹತೆಗಳನ್ನು ಹಾಗು ಇತರೆ ಮಾನದಂಡಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ **http://kea.kar.nic.in** ನಲ್ಲಿ ಪ್ರಚುರ ಪಡಿಸಲಾಗಿದೆ. ಅಭ್ಯರ್ಥಿಗಳು ವೈದ್ಯಕೀಯ ದಂತವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ನೊಂದಣಿ ಮಾಡಿಕೊಳ್ಳುವ ಮೊದಲು ಶೈಕ್ಷಣಿಕ ಅರ್ಹತೆ, ವಿವಿಧ ವರ್ಗಗಳ ಸೀಟುಗಳಿಗೆ ನಿಗದಿಪಡಿಸಿರುವ ಅರ್ಹತಾ ಮಾನದಂಡಗಳು ಮತ್ತು ಅಂತಹ ಸೀಟುಗಳಿಗೆ ನಿಗದಿಪಡಿಸಿರುವ ಅಭ್ಯರ್ಥಿಯ ಅರ್ಹತೆ ಹಾಗು ಇತ್ಯಾದಿ ಮಾನದಂಡಗಳನ್ನು ಓದಿಕೊಂಡು ನೊಂದಣಿ ಮಾಡಿಕೊಳ್ಳಲು ಸೂಚಿಸಿದೆ.
6. ಇಚ್ಛೆಯುಳ್ಳ ಅರ್ಹ ಅಭ್ಯರ್ಥಿಗಳು **ದಿನಾಂಕ 07-11-2020 ರ ಸಂ. 8.00 ಗಂಟೆಯಿಂದ 10-11-2020 ರ ಬೆ.11.00 ರ ವರೆಗೆ** ನೊಂದಣಿ ಮಾಡಿಕೊಳ್ಳಬಹುದಾಗಿದೆ. ನೊಂದಣಿ ಶುಲ್ಕವನ್ನು ಪಾವತಿಸಲು ಕೊನೆಯ **ದಿನಾಂಕ 10-11-2020 ಸಂಜೆ. 5.30 ರವರೆಗೆ.**
7. ನೊಂದಣಿ ಶುಲ್ಕ, ದಾಖಲಾತಿ ಪರಿಶೀಲನೆಯ ವೇಳಾಪಟ್ಟಿ ಮತ್ತು ವಿಧಾನ, ದಾಖಲಾತಿ ಪರಿಶೀಲನೆಗೆ ಸಲ್ಲಿಸಬೇಕಾದ ಮೂಲ ದಾಖಲಾತಿಗಳು, ಹಾಗು ಇತರೆ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿಕೊಂಡು ನೊಂದಣಿ ಮಾಡಿ ದಾಖಲಾತಿ ಪರಿಶೀಲನೆಗೆ ಹಾಜರಾಗಬಹುದು.

INSTRUCTIONS TO KARNATAKA CANDIDATES WHO HAVE ALREADY VERIFIED THEIR DOCUMENTS

Candidates who have already registered with KEA for CET-2020 and verified their documents should compulsorily register for UGNEET-2020 by entering / citing their CET-2020 admission ticket number. Candidates who have completed or completing their document verification as per their CET-2020 rank, as per CET-2006 Admission Rules, need not upload documents once again for Medical / Dental / AYUSH courses. However, if any such candidate is eligible to claim Linguistic Minority or Religious Minority or NRI ward seats or candidates eligible to claim category-2 to category-8 in St. John Medical College, Bangalore, then they have to upload such relevant certificates / documents on the day of their turn as per the NEET document verification schedule.

8. UG-NEET-2020 ರಲ್ಲಿ ಅರ್ಹತೆಯನ್ನು ಪಡೆದ ಮಾತ್ರಕ್ಕೆ, ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ / ನಿಗದಿತ ಪ್ರಮಾಣ ಪತ್ರಗಳನ್ನು ಸಲ್ಲಿಸದಿದ್ದಲ್ಲಿ ಅಭ್ಯರ್ಥಿಯು ಯಾವುದೇ ಹಕ್ಕನ್ನು ಹೊಂದುವುದಿಲ್ಲ. ಮುಂದುವರಿದು, ನೊಂದಣಿ ಮಾಡಿಕೊಂಡು ದಾಖಲಾತಿ ಪರಿಶೀಲನೆಯನ್ನು ಯಶಸ್ವಿಯಾಗಿ ಪೂರೈಸುವ ಅಭ್ಯರ್ಥಿಗಳು ಮಾತ್ರ ಕರ್ನಾಟಕದಲ್ಲಿನ ಸರ್ಕಾರಿ / ಖಾಸಗಿ ಕಾಲೇಜುಗಳಲ್ಲಿ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.

   ಸೂಚನೆ: ನೊಂದಣಿ ಮಾಡದಿರುವ ಅಥವಾ ನೊಂದಣಿ ಮಾಡಿ ದಾಖಲಾತಿಗಳನ್ನು ಪರಿಶೀಲಿಸಿಕೊಳ್ಳದೆ ಇರುವ ಅಭ್ಯರ್ಥಿಗಳು ಪ್ರಾಧಿಕಾರದಿಂದಾಗಲೀ ಅಥವಾ ಕಾಲೇಜುಗಳಿಂದಾಗಲೀ ಸೀಟುಗಳನ್ನು ತೆಗೆದುಕೊಳ್ಳಲು ಅನುಮತಿಸಲಾಗುವುದಿಲ್ಲ. mop-up ಸುತ್ತಿನ ಸೀಟು ಹಂಚಿಕೆಯ ನಂತರ ಉಳಿಯಬಹುದಾದ ಸೀಟುಗಳನ್ನು ಆಯಾ ಕಾಲೇಜುಗಳಿಗೆ ವರ್ಗಾಯಿಸಲಾಗುತ್ತದೆ. ಈ ಸೀಟುಗಳನ್ನು ಭರ್ತಿ ಮಾಡಿಕೊಳ್ಳಲು, ಪ್ರಾಧಿಕಾರವು ಕಳುಹಿಸುವ ನೊಂದಣಿ ಮಾಡಿಕೊಂಡು ದಾಖಲಾತಿ ಪರಿಶೀಲನೆಯನ್ನು ಮಾಡಿಸಿದ ಆದರೆ ಯಾವುದೇ ಸೀಟುಗಳನ್ನು ಹಂಚಿಕೆ ಪಡೆಯದೇ ಇರುವ ಅಭ್ಯರ್ಥಿಗಳ ಪಟ್ಟಿಯ ಅನುಕ್ರಮದಂತೆ ಕಾಲೇಜುಗಳಲ್ಲಿ ಸೀಟುಗಳನ್ನು ಭರ್ತಿಮಾಡಿಕೊಳ್ಳಲಾಗುತ್ತದೆ. (ಭಾರತ ಸರ್ಕಾರದ ಸೂಚನೆಗಳ ಅನ್ವಯ)
9. ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗಮನಿಸಲು ಕೋರಿದೆ.

ಸಹಿ/-
(ವೆಂಕಟ್ ರಾಜಾ ಭಾ.ಆ.ಸೇ),
ಕಾರ್ಯನಿರ್ವಾಹಕ ನಿರ್ದೇಶಕರು.

ವಾಸಾಸಂಇ/ಬೆಂ.ನ/ಜಿಎ/1589/2020-21

ಕೋವಿಡ್-19. ಆತಂಕ ಬೇಡ; ಮುನ್ನೆಚ್ಚರಿಕೆ ಇರಲಿ.

ಮಾಸ್ಕ್ ಧರಿಸಿ | 6 ಅಡಿ ದೈಹಿಕ ಅಂತರ ಪಾಲಿಸಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ

12x27 cms